ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT: ಶಾಸಕಾಂಗ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE 18/2/2021

18/2/21

# ಶಾಸನಸಭೆಗಳಲ್ಲಿ ಗುಣಮಟ್ಟದ ಚರ್ಚೆ ಕುರಿತು ವಿಚಾರ ಸಂಕಿರಣ

ಬೆಂಗಳೂರು: ರಾಜ್ಯದ ಶಾಸನಸಭೆಗಳಲ್ಲಿ ಅರ್ಥಪೂರ್ಣ ಚರ್ಚೆ ನಡೆಯಬೇಕೆಂಬ ಸದುದ್ದೇಶದಿಂದ ಕಾಮನ್‌ವೆಲ್ತ್ ಸಂಸದೀಯ ಸಂಘದಿಂದ ಸಂಸದೀಯ ಮೌಲ್ಯಗಳ ಕುಸಿತವನ್ನು ತಡೆಗಟ್ಟುವ ನಿಟ್ಟಿನಲ್ಲಿ ಒಂದು ಆತ್ಮಾವಲೋಕನ ಎಂಬ ವಿಚಾರ ಸಂಕಿರಣವನ್ನು ಫೆಬ್ರವರಿ 24ರಂದು ಬೆಳಗ್ಗೆ 11 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಲಾಗಿದೆ.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದ ನಾನಾ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಗಣ್ಯರೊಂದಿಗೆ ಒಂದು ದಿನದ ಆತ್ಮಾವಲೋಕನ ಸಭೆ ನಡೆಯಲಿದೆ. ವಿಧಾನಮಂಡಲದ ಉಭಯ ಸದನಗಳ ಹಿಂದಿನ ಸಭಾಧ್ಯಕ್ಷರು, ಸಭಾಪತಿಗಳು, ಪತ್ರಕರ್ತರು, ಸಾಹಿತಿಗಳು, ಬರಹಗಾರರು, ಚಿಂತಕರು ಸೇರಿದಂತೆ ಹಲವು ಗಣ್ಯರನ್ನು ಆಹ್ವಾನಿಸಲಾಗಿದೆ ಎಂದು ತಿಳಿಸಿದರು. ಇತ್ತೀಚಿನ ದಿನಗಳಲ್ಲಿ ಸದನಗಳಲ್ಲಿ ಸಂಸದೀಯ ಮೌಲ್ಯಗಳು ಕುಸಿಯುತ್ತಿರುವ ಕಾರಣ ಈ ಆತ್ಮಾವಲೋಕನ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ಮುಂದಿನ ದಿನಗಳಲ್ಲಿ ಯಾವ ವಿಷಯಗಳನ್ನು ಹೇಗೆ ಚರ್ಚಿಸಬೇಕು ಎಂಬುದರ ಬಗ್ಗೆ ಚರ್ಚೆ ಮಾಡಲಾಗುವುದು. ಇದರಿಂದ ಹೊಸದಾಗಿ ಆಯ್ಕೆಯಾಗಿ ಬಂದ ಸದಸ್ಯರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.